**ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ತ್ವರಿತ ವಿಶೇಷ ನ್ಯಾಯಾಲಯ–I, ಚಾಮರಾಜನಗರ**

# SC No.130/2023

ಚಾಸಾ: 15 / ಪ್ರಾಸಾ: 12

ದಿನಾಂಕ **23.12.2025** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿದಾರರ ಹೆಸರು | : | **ಶ್ರೀ ಕೆ.ಎಂ. ಕುಮಾರ್** |
| **ತಂದೆ** / ಗಂಡನ ಹೆಸರು | : | ಲೇಟ್ ಮಹದೇವಪ್ಪ |
| ವಯಸ್ಸು | : | 50 ವರ್ಷ |
| ವೃತ್ತಿ | : | ವ್ಯವಸಾಯ |
| ವಿಳಾಸ | : | ಕಂದೇಗಾಲ ಗ್ರಾಮ, ಗುಂಡ್ಲುಪೇಟೆ ತಾಲ್ಲೂಕು, ಚಾಮರಾಜನಗರ ಜಿಲ್ಲೆ. |

**ಮುಖ್ಯ ವಿಚಾರಣೆ – ಮಾನ್ಯ ಸರ್ಕಾರಿ ಅಭಿಯೋಜಕರಿಂದ**

ನನಗೆ ಚಾಸಾಃ2 ಹಾಗೂ 14ರವರ ಪರಿಚಯ ಇಲ್ಲ. ಚಾಸಾಃ2 ಹಾಗೂ 14ರವರೊಡನೆ ನನಗೆ ಯಾವುದೇ ಹಣಕಾಸಿನ ವ್ಯವಹಾರ ಇರುವುದಿಲ್ಲ. ಚಾಸಾಃ14ರವರು ನನ್ನ ಬಳಿ ಹಣವನ್ನು ಸಾಲವಾಗಿ ಪಡೆದುಕೊಂಡಿರುವುದಿಲ್ಲ. ಆರೋಪಿ 1 ಮತ್ತು 2ರವರ ಪರಿಚಯ ಇರುವುದಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ರಾಜೇಗೌಡರಿಗೆ ಗಾಯಗಳಾಗಿರುವ ಬಗ್ಗೆ ಗೊತ್ತಿಲ್ಲ. ಪೊಲೀಸರಿಗೆ ನಾನು ಯಾವುದೇ ಹೇಳಿಕೆ ನೀಡಿರುವುದಿಲ್ಲ. ಆರೋಪಿಗಳು ಹಣಕಾಸಿನ ವ್ಯವಹಾರದ ವಿಚಾರವಾಗಿ ಚಾಸಾಃ2ರವರೊಡನೆ ಜಗಳ ಮಾಡಿ ಚಾಸಾಃ2ರವರ ಮೇಲೆ ಹಲ್ಲೆ ಮಾಡಿರುವ ಸಂಗತಿ ನನಗೆ ತಿಳಿದಿಲ್ಲ.

(ಈ ಸಮಯದಲ್ಲಿ ಮಾನ್ಯ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮನವಿ ಮಾಡಿರುತ್ತಾರೆ. ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಮಾನ್ಯ ಸರ್ಕಾರಿ ಅಭಿಯೋಜಕರಿಂದ**

**02**. ದಿನಾಂಕ 10.06.2019ರ ಸಾಕ್ಷಿಯ ಹೇಳಿಕೆಯನ್ನು ಓದಿ ಹೇಳಿ ವಿವರಿಸಲಾಯಿತು. ಸಾಕ್ಷಿ ತಮ್ಮ ಹೇಳಿಕೆಯಲ್ಲಿ "2018ನೇ ಇಸವಿ ಫೆಬ್ರವರಿ ------------ ನನ್ನ ಹೇಳಿಕೆ ನೀಡಿರುತ್ತೇನೆ" ಎಂಬ ಭಾಗವನ್ನು ನಿರಾಕರಿಸಿರುತ್ತಾರೆ, ಸಾಕ್ಷಿಯ ಹೇಳಿಕೆಯ ಭಾಗವನ್ನು ನಿಪಿಃ**18** ಎಂದು ಗುರುತಿಸಲಾಯಿತು.

**03**. ಚಾಸಾಃ14ರವರು ಟ್ರಾಕ್ಟರ್ ಖರೀದಿ ಮಾಡುವ ಸಲುವಾಗಿ ನನ್ನಿಂದ 3 ಲಕ್ಷ ರೂಪಾಯಿಗಳನ್ನು ಸಾಲವಾಗಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಶಿವೇಗೌಡ/ಚಾಸಾಃ14ರವರಿಗೆ ಹೃದಯದ ತೊಂದರೆಯಾದ ಕಾರಣ ಕೆಆರ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದ ಕಾರಣ ನಾನು ಅವರಿಂದ ಹಣ ವಾಪಸ್ಸು ಕೇಳಿರುವುದಿಲ್ಲ. ಚಾಸಾಃ2ರವರು ಚಾಸಾಃ14ರವರಿಂದ ನಾನು ಸಾಲವಾಗಿ ಕೊಟ್ಟಿದ್ದ 3 ಲಕ್ಷ ರೂಪಾಯಿ ಹಣವನ್ನು ಪಡೆದುಕೊಂಡು ಮರಳಿ ಕೊಟ್ಟಿರುವುದಿಲ್ಲ ಎಂದು ಚಾಸಾಃ14 ನನಗೆ ಹೇಳಿಲ್ಲ. ಚಾಸಾಃ2ರವರ ನಂತರ ಮೂವತ್ತು ಸಾವಿರ ರೂಪಾಯಿಗಳನ್ನು ಚಾಸಾಃ14ರವರಿಗೆ ಹಿಂತಿರುಗಿಸಿದ್ದು ಉಳಿಕೆ ಎರಡು ಲಕ್ಷ ಎಪ್ಪತ್ತು ಸಾವಿರ ರೂಪಾಯಿ ಬಾಕಿ ಇರುತ್ತದೆ. ಎಂದರೆ ಸರಿಯಲ್ಲ. ಈ

ಪ್ರಕರಣದ 1ನೇ ಆರೋಪಿಗೂ ಚಾಸಾಃ2ರವರಿಗೂ ಹಣಕಾಸಿನ ವ್ಯವಹಾರದಲ್ಲಿ ಜಗಳವಾಗಿದ್ದು ಆರೋಪಿಗಳು ಚಾಸಾಃ2ರವರನ್ನು ಕೊಲೆ ಮಾಡುವ ಉದ್ದೇಶದಿಂದ ಚಾಸಾಃ2ರವರ ಕತ್ತು ಹಾಗೂ ಮೈಕೈಗೆ ಚಾಕುವಿನಿಂದ ಹೊಡೆದು ಗಾಯಗೊಳಿಸಿ ಕೊಲೆ ಮಾಡಲು ಪ್ರಯತ್ನಿಸಿರುತ್ತಾರೆ ಎಂದು ನಾನು ಹೇಳಿಕೆ ನೀಡಿರುವುದಿಲ್ಲ. ನಿಪಿಃ18ರಂತೆ ಹೇಳಿಕೆ ನೀಡಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ.

**ಪಾಟೀ ಸವಾಲು ಆರೋಪಿಗಳ ಪರವಾಗಿಃ ಶ್ರೀ ಎಸ್.ಆರ್.ಕೆ. ವಕೀಲರಿಂದ**

ಆರೋಪಿ ಪರ ವಕೀಲರು ಹಾಜರಿದ್ದು ಸಾಕ್ಷಿಯ ಪಾಟೀ ಸವಾಲು ಇಲ್ಲ ಎಂದು ಹೇಳಿದ್ದರಿಂದ ಸಾಕ್ಷಿಯ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆಃ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಲಾಗಿ ಕೇಳಿ ಸರಿಯಿದೆ ಎಂದು ಒಪ್ಪಿರುತ್ತಾರೆ.

**(ಎಸ್.ಜೆ. ಕೃಷ್ಣ)**
ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ,
ತ್ವರಿತ ವಿಶೇಷ ನ್ಯಾಯಾಲಯ–I, ಚಾಮರಾಜನಗರ.

S J KRISHNA
Digitally signed by S J KRISHNA
Date: 2026.02.06 16:35:47 +0530

# ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ತ್ವರಿತ ವಿಶೇಷ ನ್ಯಾಯಾಲಯ–I, ಚಾಮರಾಜನಗರ

## SC No.130/2023

ಚಾಸಾ: 14 / ಪ್ರಾಸಾ: **13**

ದಿನಾಂಕ **23.12.2025** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿದಾರರ ಹೆಸರು | : | **ಶ್ರೀ ಶಿವೇಗೌಡ** |
| **ತಂದೆ** / ಗಂಡನ ಹೆಸರು | : | ಲೇಟ್ ಬೆಟ್ಟೇಗೌಡ |
| ವಯಸ್ಸು | : | 45 ವರ್ಷ |
| ವೃತ್ತಿ | : | ವ್ಯವಸಾಯ |
| ವಿಳಾಸ | : | ಸಂಗೇಗೌಡನಹುಂಡಿ ಗ್ರಾಮ, ಗುಂಡ್ಲುಪೇಟೆ ತಾಲ್ಲೂಕು, ಚಾಮರಾಜನಗರ ಜಿಲ್ಲೆ. |

**ಮುಖ್ಯ ವಿಚಾರಣೆ – ಮಾನ್ಯ ಸರ್ಕಾರಿ ಅಭಿಯೋಜಕರಿಂದ**

ನನಗೆ ಚಾಸಾಃ15ರವರ ಪರಿಚಯ ಇದೆ. ಚಾಸಾಃ2ರವರ ಪರಿಚಯ ಇಲ್ಲ. ಆರೋಪಿಗಳ ಪರಿಚಯ ಇರುವುದಿಲ್ಲ. ನಾನು ಚಾಸಾಃ15ರವರಿಂದ ಹಣವನ್ನು ಸಾಲವಾಗಿ ಪಡೆದುಕೊಂಡಿರುವುದಿಲ್ಲ. ನಾನು ಚಾಸಾಃ15ರವರಿಂದ ಪಡೆದುಕೊಂಡ 3 ಲಕ್ಷ ರೂಪಾಯಿಗಳನ್ನು ಚಾಸಾಃ2ರವರು ನನ್ನಿಂದ ಸಾಲವಾಗಿ ಪಡೆದುಕೊಂಡಿರುವುದಿಲ್ಲ. ಆರೋಪಿಗಳು ಚಾಸಾಃ2ರವರ ಮೇಲೆ ಹಲ್ಲೆ ಮಾಡಿರುವ ಸಂಗತಿ ನನಗೆ ಗೊತ್ತಿಲ್ಲ. ಪೊಲೀಸರಿಗೆ ನಾನು ಯಾವುದೇ ಹೇಳಿಕೆ ನೀಡಿರುವುದಿಲ್ಲ. ಆರೋಪಿಗಳು ಹಣಕಾಸಿನ ವ್ಯವಹಾರದ ವಿಚಾರವಾಗಿ ಚಾಸಾಃ2ರವರೊಡನೆ ಜಗಳ ಮಾಡಿ ಚಾಸಾಃ2ರವರ ಮೇಲೆ ಹಲ್ಲೆ ಮಾಡಿರುವ ಸಂಗತಿ ನನಗೆ ತಿಳಿದಿಲ್ಲ.

(ಈ ಸಮಯದಲ್ಲಿ ಮಾನ್ಯ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮನವಿ ಮಾಡಿರುತ್ತಾರೆ. ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಮಾನ್ಯ ಸರ್ಕಾರಿ ಅಭಿಯೋಜಕರಿಂದ**

**02**. ದಿನಾಂಕ 10.06.2019ರ ಸಾಕ್ಷಿಯ ಹೇಳಿಕೆಯನ್ನು ಓದಿ ಹೇಳಿ ವಿವರಿಸಲಾಯಿತು. ಸಾಕ್ಷಿ ತಮ್ಮ ಹೇಳಿಕೆಯಲ್ಲಿ "2018ನೇ ಇಸವಿ ಫೆಬ್ರವರಿ ------------ ನನ್ನ ಹೇಳಿಕೆ ನೀಡಿರುತ್ತೇನೆ" ಎಂಬ ಭಾಗವನ್ನು ನಿರಾಕರಿಸಿರುತ್ತಾರೆ, ಸಾಕ್ಷಿಯ ಹೇಳಿಕೆಯ ಭಾಗವನ್ನು ನಿಪಿಃ**19** ಎಂದು ಗುರುತಿಸಲಾಯಿತು.

**03**. ನಾನು ಟ್ರಾಕ್ಟರ್ ಖರೀದಿ ಮಾಡುವ ಸಲುವಾಗಿ ಚಾಸಾಃ15ರವರಿಂದ 3 ಲಕ್ಷ ರೂಪಾಯಿಗಳನ್ನು ಸಾಲವಾಗಿ ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ನನಗೆ ಹೃದಯದ ತೊಂದರೆಯಾದ ಕಾರಣ ಕೆಆರ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದ ಕಾರಣ ಚಾಸಾಃ15ರವರಿಗೆ ಹಣ ವಾಪಸ್ಸು ಕೊಟ್ಟಿರುವುದಿಲ್ಲ ಎಂದರೆ ಸರಿಯಲ್ಲ. ಚಾಸಾಃ2ರವರು ನನ್ನಿಂದ ಸಾಲವಾಗಿ ಪಡೆದುಕೊಂಡ 3 ಲಕ್ಷ ರೂಪಾಯಿ ಹಣವನ್ನು ಪಡೆದುಕೊಂಡು ಮರಳಿ ಕೊಟ್ಟಿರುವುದಿಲ್ಲ ಎಂದು ಸೂಚಿಸುವುದು ಸರಿಯಲ್ಲ. ಚಾಸಾಃ2ರವರು ನಂತರ ಮೂವತ್ತು ಸಾವಿರ ರೂಪಾಯಿಗಳನ್ನು ನನಗೆ ಹಿಂತಿರುಗಿಸಿದ್ದು ಉಳಿಕೆ ಎರಡು ಲಕ್ಷ ಎಪ್ಪತ್ತು ಸಾವಿರ ರೂಪಾಯಿ ಬಾಕಿ ಇರುತ್ತದೆ. ಎಂದರೆ ಸರಿಯಲ್ಲ. ಈ ಪ್ರಕರಣದ 1ನೇ

ಆರೋಪಿಗೂ ಚಾಸಾಃ2ರವರಿಗೂ ಹಣಕಾಸಿನ ವ್ಯವಹಾರದಲ್ಲಿ ಜಗಳವಾಗಿದ್ದು ಆರೋಪಿಗಳು ಚಾಸಾಃ2ರವರನ್ನು ಕೊಲೆ ಮಾಡುವ ಉದ್ದೇಶದಿಂದ ಚಾಸಾಃ2ರವರ ಕತ್ತು ಹಾಗೂ ಮೈಕೈಗೆ ಚಾಕುವಿನಿಂದ ಹೊಡೆದು ಗಾಯಗೊಳಿಸಿ ಕೊಲೆ ಮಾಡಲು ಪ್ರಯತ್ನಿಸಿರುತ್ತಾರೆ ಎಂದು ನಾನು ಹೇಳಿಕೆ ನೀಡಿರುವುದಿಲ್ಲ. ನಿಪಿಃ19ರಂತೆ ಹೇಳಿಕೆ ನೀಡಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ.

**ಪಾಟೀ ಸವಾಲು ಆರೋಪಿಗಳ ಪರವಾಗಿಃ ಶ್ರೀ ಎಸ್.ಆರ್.ಕೆ. ವಕೀಲರಿಂದ**

ಆರೋಪಿ ಪರ ವಕೀಲರು ಹಾಜರಿದ್ದು ಸಾಕ್ಷಿಯ ಪಾಟೀ ಸವಾಲು ಇಲ್ಲ ಎಂದು ಹೇಳಿದ್ದರಿಂದ ಸಾಕ್ಷಿಯ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆಃ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಲಾಗಿ ಕೇಳಿ ಸರಿಯಿದೆ ಎಂದು ಒಪ್ಪಿರುತ್ತಾರೆ.

**(ಎಸ್.ಜೆ. ಕೃಷ್ಣ)**
ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ,
ತ್ವರಿತ ವಿಶೇಷ ನ್ಯಾಯಾಲಯ–I, ಚಾಮರಾಜನಗರ.

S J KRISHNA
Digitally signed by S J KRISHNA
Date: 2026.02.06 16:35:53 +0530